ಅಂಗವಿಕಲರ ಕಲ್ಯಾಣ ಆಸ್ಪತ್ರೆ ಪ್ರಾರಂಭಿಸುವುದು

2547 (2991) ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕೆ.ಹೆಚ್.ಎಸ್.ಡಿ.ಪಿ ಯೋಜನೆಯಡಿ ಹುಬ್ಬಳ್ಳಿ ನಗರದಲ್ಲಿ ಅಂಗವಿಕಲರ ಕಲ್ಯಾಣ ಆಸ್ಪತ್ರೆ ಪ್ರಾರಂಭಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ?

ಆ) ಇದ್ದಲ್ಲಿ ಯಾವ ವರ್ಷದಿಂದ ಈ ಕೆಲಸ ಪ್ರಾರಂಭ ಮಾಡಲಾಗುವುದು?

ಇ. ಈ ಆಸ್ಪತ್ರೆ ಪ್ರಾರಂಭಸಲಿಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು?

ಈ. ಇಲ್ಲವಾದಲ್ಲಿ ಕಾರಣವೇನು?

ಶ್ರೀ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಕರ್ನಾಟಕ ಆರೋಗ್ಯ ವ್ಯವಸ್ಥೆ ಅಭಿವೃದ್ಧಿ ಯೋಜನೆಯಡಿ ರಾಜ್ಯದ ಬೆಂಗಳೂರು, ಮೈಸೂರು ಮತ್ತು ಬೆಳಗಾಂ ಕಂದಾಯ ವಿಭಾಗಗಳಲ್ಲಿಯ 200 ಹಾಗೂ ಗುಲ್ಬರ್ಗಾ ವಿಬಾಗದಲ್ಲಿಯ 4 ದ್ವಿತೀಯ ಹಂತದ ಆಸ್ಪತ್ರೆಗಳನ್ನು ನವೀಕರಿಸಿ ಹಾಗೂ ವಿಸ್ತರಣೆಗೊಳಿಸಲಾಗುತ್ತಿದೆ. ಅಂಗವಿಕಲರ ಕಲ್ಯಾಣ ಆಸ್ಪತ್ರೆ ಪ್ರಾರಂಭಿಸುವುದಕ್ಕೆ ಈ ಯೋಜನೆ ಅಡಿಯಲ್ಲಿ ಆಸ್ಪದವಿರುವುದಿಲ್ಲ.

ರಾಜ್ಯದಲ್ಲಿ ಹೊಸದಾಗಿ ಟಿ.ಸಿ.ಹೆಚ್. ಮತ್ತು ಬಿ.ಎಡ್ ಕಾಲೇಜುಗಳ ಮಂಜೂರಾತಿ

2548(2992) ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಹೊಸದಾಗಿ ಟಿ.ಸಿ.ಹೆಚ್. ಮತ್ತು ಬಿ.ಎಡ್ ಕಾಲೇಜುಗಳಿಗೆ ಬೇಡಿಕೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ ಈ ಕಾಲೇಜುಗಳಿಗೆ ಮಂಜೂರಾತಿ ನೀಡುವ ವಿಚಾರ ಸರ್ಕಾರದ ಮುಂದೆ ಇದೆಯೇ;

ಇ) ಇದುವರೆಗೂ ಯಾವ ಯಾವ ಸಂಸ್ಥೆಗಳಿಂದ ಬೇಡಿಕೆ ಬಂದಿರುತ್ತವೆ? (ವಿವರಗಳನ್ನು ನೀಡುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು.

ಆ) ಈ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗುತ್ತಿದೆ.

ಇ) ಸಾವಿರಾರು ಸಂಸ್ಥೆಗಳಿಂದ ಬೇಡಿಕೆ ಬಂದಿರುತ್ತವೆ.

ರಾಜ್ಯದಲ್ಲಿ ವಯಸ್ಕರ ಶಿಕ್ಷಣ ಪದ್ಧತಿಯನ್ನು ಜಾರಿಗೆ ತರುವ ವಿದ್ಯಾಪೀಠಗಳನ್ನು ಪ್ರಾರಂಭಿಸುವುದು

2549(2993) ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) :— ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಜಾರಿಗೆ ತರಲಾದ ವಯಸ್ಕರ ಶಿಕ್ಷಣ ಪದ್ಧತಿಯ ಉದ್ದೇಶಗಳೇನು;

ಆ) ಈ ಗುರಿ ಈಡೇರಿದೆಯೇ;

ಇ) ಈ ಪದ್ಧತಿಯನ್ನು ಹೆಚ್ಚು ಅರ್ಥಪೂರ್ಣವಾಗಿ ಜಾರಿಗೆ ತರಲು ಯೋಜನೆ ಸರ್ಕಾರಕ್ಕೆ ಇದೆಯೆ;

ಈ) ಈ ಯೋಜನೆಯಡಿಯಲ್ಲಿ ಎಷ್ಟು ವಿದ್ಯಾಪೀಠಗಳು ಕಾರ್ಯನಿರ್ವಹಿಸುತ್ತಿವೆ;

ಉ) ಈ ವಿದ್ಯಾಪೀಠಗಳನ್ನು ಪೂರ್ಣಕಾಲಿಕವಾಗಿ ಬಳಸಿಕೊಳ್ಳಲು ಅನುವಾಗುವಂತೆ ನಿರುದ್ಯೋಗಿ ಯುವಕರಿಗೆ ತರಬೇತಿ ನೀಡುವ ಆಲೋಚನೆ ಸರ್ಕಾರಕ್ಕೆ ಇದೆಯೇ;

ಊ) ಈ ವಿದ್ಯಾಪೀಠಗಳನ್ನು ಅಭಿವೃದ್ಧಿಪಡಿಸಿ ಉತ್ತಮ ಫಲ ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಾಬುರಾವ್ ಚವ್ವಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು) :—

ಅ) ನಿರಕ್ಷರತೆಯನ್ನು ಹೋಗಲಾಡಿಸಿ ಸಾಕ್ಷರಸ್ತರಿಗೆ ಸ್ವಾವಲಂಬಿಗಳಾಗಿ ಬದುಕಲು ಗ್ರಾಮೀಣ ನಿರುದ್ಯೋಗಿ ಯುವಜನರಿಗೆ ವೃತ್ತಿ ಕೌಶಲ್ಯ ತರಬೇತಿಗೆ ಅವಕಾಶವನ್ನು ಕಲ್ಪಿಸಿ ಕೊಡುವುದು.